# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | 1441 |
| ಸದಸ್ಯರ ಹೆಸರು | : | ಶ್ರೀ. ಸಿ.ಎಂ.ಇಬ್ರಾಹಿಂ (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 10.03.2022. |
| ಉತ್ತರಿಸುವ ಸಚಿವರು | : | ಮಾನ್ಯ ಮುಖ್ಯಮಂತ್ರಿಗಳು |

| ಕ್ರ. ಸಂ. | ಪ್ರಶ್ನೆಗಳು | ಉತ್ತರಗಳು |
|---|---|---|
| ಅ. | ಅಲ್ಪಸಂಖ್ಯಾತರ ಕಲ್ಯಾಣಕ್ಕಾಗಿ ಹಾಗೂ ಅವರ ಸಾಮಾಜಿಕ ನ್ಯಾಯ ಮತ್ತು ಸಾಮಾಜಿಕ ಅಭಿವೃದ್ಧಿಗಾಗಿ ಸರ್ಕಾರವು ರೂಪಿಸಿರುವ ಯೋಜನೆಗಳು ಯಾವುವು; ಇಲ್ಲದಿದ್ದಲ್ಲಿ ಯೋಜನೆ ರೂಪಿಸುವ ಪ್ರಸ್ತಾವನೆಯು ಸರ್ಕಾರದ ಮುಂದಿದೆಯೇ; | **ಅಲ್ಪಸಂಖ್ಯಾತರ ನಿರ್ದೇಶನಾಲಯ:** ಅಲ್ಪಸಂಖ್ಯಾತರ ಕಲ್ಯಾಣಕ್ಕಾಗಿ ಹಾಗೂ ಸಾಮಾಜಿಕ ನ್ಯಾಯ ಮತ್ತು ಸಾಮಾಜಿಕ ಅಭಿವೃದ್ಧಿಗಾಗಿ ಕಾರ್ಯಗತಗೊಳಿಸಲಾಗುತ್ತಿರುವ ಕಾರ್ಯಕ್ರಮಗಳು/ ಯೋಜನೆಗಳ ವಿವರಗಳು ಈ ಕೆಳಕಂಡಂತಿವೆ. |

| ಕ್ರ.ಸಂ | ಯೋಜನೆ/ ಕಾರ್ಯಕ್ರಮಗಳ ವಿವರ |
|---|---|
| 1 | ಅಲ್ಪಸಂಖ್ಯಾತರ ವಸತಿ ಶಾಲೆಗಳ ನಿರ್ವಹಣೆ |
| 2 | ನೂತನ ಹಾಸ್ಟೆಲ್‌ಗಳ ಪ್ರಾರಂಭ ಮತ್ತು ಮೌಲಾನಾ ಆಜ್ಹಾದ್ ಶಾಲೆಗಳ ನಿರ್ವಹಣೆ |
| 3 | ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ ಹಾಸ್ಟೆಲ್‌ಗಳ ನಿರ್ವಹಣೆ |
| 4 | ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ ವಿದ್ಯಾಸಿರಿ ಯೋಜನೆ |
| 5 | ಕ್ರಿಶ್ಚಿಯನ್ ಸಮುದಾಯದ ಅಭಿವೃದ್ಧಿಗಾಗಿ ಸಮುದಾಯ ಭವನ, ಚರ್ಚ್ ದುರಸ್ಥಿ, ಜೀರ್ಣೋದ್ಧಾರ ಅನಾಥಾಶ್ರಮ/ವೃದ್ಧಾಶ್ರಮ ನಿರ್ವಹಣೆ. |
| 6 | ಜೈನ್, ಬೌದ್ಧ ಮತ್ತು ಸಿಖ್ ಸಮುದಾಯದ ಅಭಿವೃದ್ಧಿಗಾಗಿ ಬಸದಿ ಸಮುದಾಯಭವನ ನಿರ್ಮಾಣ |
| 7 | ಮದರಸದಲ್ಲಿ ಉತ್ತಮ ಗುಣಮಟ್ಟದ ಶಿಕ್ಷಣವನ್ನು ಒದಗಿಸಲು ಮದರಸಗಳ ಆಧುನೀಕರಣ ಮತ್ತು ಗಣಕೀಕೃತ ಶಿಕ್ಷಣ ನೀಡಲು ಅನುದಾನ |
| 8 | ಅಲ್ಪಸಂಖ್ಯಾತರಿಗಾಗಿ ವಸತಿ ನಿಲಯ ಮತ್ತು ವಸತಿ ಶಾಲೆ ಕಟ್ಟಡಗಳ ನಿರ್ಮಾಣ |
| 9 | 11 ಕಾರ್ಪೋರೇಷನ್‌ಗಳಲ್ಲಿ ಅಲ್ಪಸಂಖ್ಯಾತರ ಸ್ಲಮ್/ಕಾಲೋನಿ ಅಭಿವೃದ್ಧಿಗಾಗಿ ಯೋಜನೆ |
| 10 | ಪ್ರಧಾನ ಮಂತ್ರಿ ಜನವಿಕಾಸ ಕಾರ್ಯಕ್ರಮದಡಿಯಲ್ಲಿ ವಸತಿ ಶಾಲೆಗಳ ಕಟ್ಟಡ ನಿರ್ಮಾಣ |
| 11 | ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ತರಬೇತಿ ಕಾರ್ಯಕ್ರಮ |
| 12 | ಸರ್ಕಾರಿ ಅಲ್ಪಸಂಖ್ಯಾತರ ಶಾಲೆಗಳಿಗೆ ಶಿಕ್ಷಣ ಮತ್ತು ಕಲಿಕೆ ಸಾಧನಗಳು |
| 13 | ಅಲ್ಪಸಂಖ್ಯಾತರಿಗೆ ವಿದ್ಯಾರ್ಥಿವೇತನ ಮತ್ತು ಶುಲ್ಕ ಮರುಪಾವತಿ |
| 14 | ಅಲ್ಪಸಂಖ್ಯಾತ ವಿದ್ಯಾರ್ಥಿಗಳಿಗೆ ಉತ್ತೇಜನ ಕಾರ್ಯಕ್ರಮಗಳು |
| 15 | ಅಲ್ಪಸಂಖ್ಯಾತರಿಗಾಗಿ ಕಾನೂನು ಪದವೀಧರರಿಗೆ ತರಬೇತಿ ಭತ್ಯೆ |
| 16 | ಅಲ್ಪಸಂಖ್ಯಾತರಿಗಾಗಿ ಅನಾಥಾಲಯ ನಿರ್ವಹಣೆಗಾಗಿ ಅನುದಾನ |

**ಕರ್ನಾಟಕ ರಾಜ್ಯ ವಕ್ಫ್ ಮಂಡಳಿ:**

ಕರ್ನಾಟಕ ರಾಜ್ಯ ವಕ್ಫ್ ಮಂಡಳಿ ವತಿಯಿಂದ ಈ ಕೆಳಕಂಡ ಕಾರ್ಯಕ್ರಮಗಳನ್ನು ಅಲ್ಪಸಂಖ್ಯಾತರಿಗೆ ಸಂಬಂಧಿಸಿದಂತೆ ಅನುಷ್ಠಾನಗೊಳಿಸಿದೆ.

1) ಕರ್ನಾಟಕ ವಕ್ಫ್ ಆಸ್ತಿಗಳ ಸಂರಕ್ಷಣೆ ಯೋಜನೆ.
2) ಪೇಶ್ ಇಮಾಮ ಮತ್ತು ಮೌಜ್ಜಿನಗಳಿಗೆ ಗೌರವಧನ.
3) ಅಲ್ಪಸಂಖ್ಯಾತರ ಪ್ರಮುಖ ಯಾತ್ರಾ ಸ್ಥಳಗಳ ಮೂಲಸೌಕರ್ಯಕ್ಕಾಗಿ ಅನುದಾನ.

**ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ ನಿಯಮಿತ:-**

ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದಿಂದ ಅಲ್ಪಸಂಖ್ಯಾತರ ಕಲ್ಯಾಣಕ್ಕಾಗಿ ಹಾಗೂ ಅವರ ಸಾಮಾಜಿಕ ನ್ಯಾಯ ಮತ್ತು ಸಾಮಾಜಿಕ ಅಭಿವೃದ್ಧಿಗಾಗಿ 2021-22ನೇ ಸಾಲಿನಲ್ಲಿ ಅನುಷ್ಠಾನಗೊಳಸುತ್ತಿರುವ ಯೋಜನೆಗಳು ಈ ಕೆಳಗಿನಂತಿದೆ.

1. ಅರಿವು (ವಿದ್ಯಾಭ್ಯಾಸ ಸಾಲ) ಯೋಜನೆ
2. ಗಂಗಾಕಲ್ಯಾಣ ಯೋಜನೆ
3. ಶ್ರಮಶಕ್ತಿ ಯೋಜನೆ
4. ಸಣ್ಣ (ಮೈಕ್ರೋ) ಸಾಲ ಮತ್ತು ಸಹಾಯಧನ ಯೋಜನೆ
5. ಮೈಕ್ರೋವೈಯುಕ್ತಿಕ (ಸಣ್ಣ) (ಕೋವಿಡ್-19) ಸಾಲ ಯೋಜನೆ
6. ಟ್ಯಾಕ್ಸಿ/ಗೂಡ್ಸ್ ವಾಹನ/ಆಟೋರಿಕ್ಷಾ ಖರೀದಿಸಲು ಸಹಾಯಧನ ಯೋಜನೆ.

**ಕರ್ನಾಟಕ ರಾಜ್ಯ ವಕ್ಫ್ ಪರಿಷತ್ತು ಮತ್ತು ಕರ್ನಾಟಕ ರಾಜ್ಯ ಮಹಿಳಾ ಅಭಿವೃಧ್ಧಿ ಪ್ರತಿಷ್ಠಾನ:**

ಕರ್ನಾಟಕ ರಾಜ್ಯ ವಕ್ಫ್ ಪರಿಷತ್ತಿನಲ್ಲಿ ವಕ್ಫ್ ಸಂಸ್ಥೆಗಳ ಅಭಿವೃದ್ಧಿ ಯೋಜನೆ ಹಾಗೂ ಕರ್ನಾಟಕ ರಾಜ್ಯ ವಕ್ಫ್ ಮಹಿಳಾ ಅಭಿವೃದ್ಧಿ ಪ್ರತಿಷ್ಠಾನದಲ್ಲಿ ಮುಸ್ಲಿಂ ಮಹಿಳೆ ಮತ್ತು ಹೆಣ್ಣು ಮಕ್ಕಳಿಗೆ ಆರೋಗ್ಯ ಪರಿಹಾರ ನಿಧಿ ಯೋಜನೆಯನ್ನು ಅನುಷ್ಠಾನಗೊಳಸಲಾಗುತ್ತಿದೆ.

**ಕರ್ನಾಟಕ ರಾಜ್ಯ ಹಜ್ ಸಮಿತಿ:**

ಕರ್ನಾಟಕ ರಾಜ್ಯ ಹಜ್ ಸಮಿತಿಯಲ್ಲಿ ಅಲ್ಪಸಂಖ್ಯಾತರ ಮುಸ್ಲಿಂ ಸಮುದಾಯದ ಜನಾಂಗದವರಿಗಾಗಿ ಹಜ್ ಯಾತ್ರೆಗೆ ತೆರಳುವ ಸಂದರ್ಭದಲ್ಲಿ ಯಾತ್ರಾರ್ಥಿಗಳಿಗೆ ಪೂರ್ವಭಾವಿ ತರಬೇತಿ ಹಾಗೂ ಹಜ್ ಯಾತ್ರೆಯ ಬಗ್ಗೆ ಮಾರ್ಗದರ್ಶನ ನೀಡಲಾಗುತ್ತದೆ.

**ಕರ್ನಾಟಕ ರಾಜ್ಯ ಉರ್ದು ಅಕಾಡೆಮಿ:**

ಕರ್ನಾಟಕ ರಾಜ್ಯದಲ್ಲಿ ಅಲ್ಪಸಂಖ್ಯಾತ ಸಮುದಾಯದವರನ್ನು ಕೇಂದ್ರವಾಗಿಟ್ಟುಕೊಂಡು ಉರ್ದು ಭಾಷೆ, ಸಾಹಿತ್ಯ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದ್ದು, ಕಾರ್ಯಕ್ರಮಗಳ ವಿವರ **"ಅನುಬಂಧ-1"** ರಲ್ಲಿ ನೀಡಲಾಗಿದೆ.

| | | |
|---|---|---|
| ಆ. | ಅಲ್ಪಸಂಖ್ಯಾತರಲ್ಲಿನ ಕೆಲವು ಸಮುದಾಯಗಳು ಕಡುಬಡತನದಲ್ಲಿದ್ದು, ಅವರ ಅಭಿವೃದ್ಧಿಗಾಗಿ ಸರ್ಕಾರವು ಹಮ್ಮಿಕೊಂಡಿರುವ ಕಾರ್ಯಕ್ರಮಗಳೇನು; ಜನಾಂಗದ ಕಟ್ಟಕಡೆಯ ವ್ಯಕ್ತಿಯನ್ನು ತಲುಪಿಸುವ ನಿಟ್ಟಿನಲ್ಲಿ ಯಾವ ಕಲ್ಯಾಣ ಕಾರ್ಯಕ್ರಮಗಳನ್ನು ರೂಪಿಸಲಾಗಿದೆ/ ರೂಪಿಸಲಾಗುವುದು; | <u>**ಅಲ್ಪಸಂಖ್ಯಾತರ ನಿರ್ದೇಶನಾಲಯ:**</u><br>ಅಲ್ಪಸಂಖ್ಯಾತರ ಕಲ್ಯಾಣಕ್ಕಾಗಿ ರೂಪಿಸಿ ಕಾರ್ಯಗತಗೊಳಸಲಾಗುತ್ತಿರುವ ಯೋಜನೆಗಳನ್ನು ಅಲ್ಪಸಂಖ್ಯಾತರ ಸಮುದಾಯದ ಕಟ್ಟಕಡೆಯ ವ್ಯಕ್ತಿಗೆ ತಲುಪಿಸುವ ನಿಟ್ಟಿನಲ್ಲಿ ಕ್ರಮವಹಿಸಲಾಗುತ್ತಿದ್ದು, ಸದರಿ ಕಾರ್ಯಕ್ರಮಗಳ/ಯೋಜನೆಗಳ ವಿವರಗಳನ್ನು <u>**ಅನುಬಂಧ-2**</u> ರಲ್ಲಿ ನೀಡಲಾಗಿದೆ.<br><br><u>**ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ ನಿಯಮಿತ:**</u><br>ಅಲ್ಪಸಂಖ್ಯಾತರ ಸಮುದಾಯದ ಕಡುಬಡವರ ಅಭಿವೃದ್ಧಿಗಾಗಿ ಹಮ್ಮಿಕೊಂಡಿರುವ ಕಾರ್ಯಕ್ರಮಗಳ ವಿವರಗಳನ್ನು <u>**ಅನುಬಂಧ-3**</u> ರಲ್ಲಿ ನೀಡಲಾಗಿದೆ. |
| ಇ. | ಅಲ್ಪಸಂಖ್ಯಾತರ ಸಮುದಾಯಕ್ಕೆ ಸೇರಿದ ಬಡವರ ಮಕ್ಕಳು ಸೂಕ್ತ ವೃತ್ತಿ ಮಾರ್ಗದರ್ಶನದ ಕೊರತೆಯಿಂದ ಉತ್ತಮ ಶಿಕ್ಷಣ ಹಾಗೂ ಉದ್ಯೋಗ ಪಡೆಯುವುದರಿಂದ ವಂಚಿತರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹೌದಾದಲ್ಲಿ, ಯಾವ ಕ್ರಮವಹಿಸಲಾಗಿದೆ; ಇಲ್ಲದಿದ್ದಲ್ಲಿ, ಸಾಮಾಜಿಕ, ಶೈಕ್ಷಣಿಕ ಮತ್ತು ಆರ್ಥಿಕ ಬೆಳವಣಿಗೆಗೆ ಕಲ್ಯಾಣ ಕಾರ್ಯಕ್ರಮಗಳನ್ನು ರೂಪಿಸಲಾಗುವುದೇ? | ಹೌದು,<br>ಅಲ್ಪಸಂಖ್ಯಾತರ ನಿರ್ದೇಶನಾಲಯದಿಂದ ಅಲ್ಪಸಂಖ್ಯಾತರ ಸಮುದಾಯಕ್ಕೆ ಸೇರಿದ ಬಡವರ ಮಕ್ಕಳ ಶೈಕ್ಷಣಿಕ, ಆರ್ಥಿಕ ಹಾಗೂ ಉದ್ಯೋಗ ಬೆಳವಣಿಗೆಗೆ ಈ ಕೆಳಕಂಡಂತೆ ಕಾರ್ಯಕ್ರಮ/ಯೋಜನೆಗಳನ್ನು ರೂಪಿಸಲಾಗಿದೆ. ಅವುಗಳ ವಿವರವನ್ನು <u>**ಅನುಬಂಧ-2**</u> ರಲ್ಲಿ ನೀಡಲಾಗಿದೆ.<br><br>ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ ನಿಯಮಿತದಿಂದ ಅಲ್ಪಸಂಖ್ಯಾತರ ಸಮುದಾಯಕ್ಕೆ ಸೇರಿದ ಬಡವರ ಮಕ್ಕಳ ಶೈಕ್ಷಣಿಕ ಉದ್ದೇಶಕ್ಕಾಗಿ 'ಅರಿವು' ವಿದ್ಯಾಭ್ಯಾಸ/ಶೈಕ್ಷಣಿಕ ಸಾಲ ಯೋಜನೆ ಮತ್ತು ಸಾಮಾಜಿಕ ಮತ್ತು ಆರ್ಥಿಕ ಬೆಳವಣಿಗೆಗೆ ಹಲವಾರು ಕಲ್ಯಾಣ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದ್ದು ಅದರ ವಿವರಗಳನ್ನು <u>ಅನುಬಂಧ-3</u> ರಲ್ಲಿ ನೀಡಲಾಗಿದೆ. |

**ಸಂಖ್ಯೆ: MWD 97 LMQ 2022**

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ

ಅನುಬಂಧ -1

ಅನುಬಂಧ

## ಅಕಾಡೆಮಿಯ ಕಾರ್ಯಚಟುವಟಿಕೆಗಳು ಹಾಗೂ ಕಾರ್ಯಕ್ರಮಗಳು

- ಉರ್ದು ಸಾಹಿತ್ಯ ಪುಸ್ತಕಗಳನ್ನು ಹಾಗೂ ನಿಯತಕಾಲಿಕೆಗಳನ್ನು ಪ್ರಕಟಿಸುವುದು ಹಾಗೂ ಇವುಗಳನ್ನು ಸಾಹಿತಿಗಳಿಗೆ, ವಿದ್ಯಾಸಂಸ್ಥೆಗಳಿಗೆ, ಮತ್ತುಉರ್ದು ಬೆಳವಣಿಗೆಗಾಗಿ ಶ್ರಮಿಸುತ್ತಿರುವ ಸಂಘಸಂಸ್ಥೆಗಳಿಗೆ ಹಾಗೂ ಗ್ರಂಥಾಲಯಗಳಿಗೆ ಉಚಿತವಾಗಿ ನೀಡುವುದು. ಬರಹಗಾರರು; ಕವಿಗಳ ಪುಸ್ತಕ ಪ್ರಕಟಣೆಗೆಅಕಾಡೆಮಿಯಿಂದಧನಸಹಾಯ ನೀಡುವುದು.
- ಉರ್ದು ಪತ್ರಕರ್ತರುಗಳಿಗೆ ಪತ್ರಿಕೋದ್ಯಮದ ವಿವಿಧ ವಿಷಯಗಳಲ್ಲಿ ಕಾರ್ಯಗಾರ ನಡೆಸುವುದು.
- .ಸಾಹಿತಿ, ಕವಿ, ಪತ್ರಿಕೋದ್ಯಮಿಗಳಿಗೆ ವೈದ್ಯಕೀಯ ನೆರವು ನೀಡುವುದು.
- ಸಾಂಸ್ಕೃತಿಕ ಕಾರ್ಯಕ್ರಮಗಳಾದ ಗಜಲ್‌ಗಾಯನ, ಖವಾಲಿ, ಕವಿಗೋಷ್ಠಿ, ನಾಟಕ ಪ್ರದರ್ಶನ ಹಾಗೂ ಮರ್ಸಿಯಾ ಖಾನಿ ಗಳನ್ನು ಏರ್ಪಡಿಸುವುದು.
- ಸಾಹಿತ್ಯಕ ಕಾರ್ಯಕ್ರಮಗಳಾದ ಸಾಹಿತಿ ಸಂವಾದ, ತರಬೇತಿ ಶಿಬಿರಗಳು, ವಿಚಾರ ಸಂಕಿರಣ, ಕಾರ್ಯಗಾರಏರ್ಪಡಿಸುವುದು.
- ಸ್ಥಳೀಯ ಉರ್ದು ಕಲಿಕಾ ಕೇಂದ್ರಗಳ ಸ್ಥಾಪನೆ.
- ಉರ್ದು ವಿದ್ಯಾರ್ಥಿಗಳಿಗೆ ನಾಯಕತ್ವಕಾರ್ಯಕ್ರಮ, ವೃತ್ತಿ ಮಾರ್ಗದರ್ಶನ ಮತ್ತು ಸಮಾಲೋಚನೆ.
- ವಾರ್ಷಿಕಗೌರವ ಪ್ರಶಸ್ತಿ ಹಾಗೂ ಪುಸ್ತಕ ಬಹುಮಾನಗಳು. ಕವಿಗಳು, ಸಾಹಿತಿಗಾರರು, ಪತ್ರಕರ್ತರಿಗೆ ಹಾಗೂ ಕಲಾವಿದರಿಗೆ ಪ್ರೋತ್ಸಾಹಿಸಲು ಪ್ರಶಸ್ತಿ ಹಾಗೂ ಪ್ರಸಕ್ತ ಸಾಲಿನ ಉತ್ತಮ ಪುಸ್ತಕಗಳಿಗೆ ಬಹುಮಾನ ನೀಡುವುದು.
- ಎಸ್.ಎಸ್.ಎಲ್.ಸಿ./ಪಿ.ಯು.ಸಿ. ವ್ಯಾಸಂಗ ಮಾಡುತ್ತಿರುವಉರ್ದು ವಿದ್ಯಾರ್ಥಿಗಳ ಫಲಿತಾಂಶಉತ್ತಮ ಪಡಿಸಲು 30 ಜಿಲ್ಲೆಗಳಲ್ಲಿ ಉರ್ದು ಶಿಕ್ಷಕರ ತಾತ್ಕಾಲಿಕ ಸೇವೆಯನ್ನುಒದಗಿಸುವುದು.
- ಸಂಚಾರಿಗ್ರಂಥಾಲಯವನ್ನುಉರ್ದು ಪುಸ್ತಕಗಳ ಪ್ರದರ್ಶನ ಹಾಗೂ ಮಾರಾಟಕ್ಕಾಗಿರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಸಂಚರಿಸುವುದು.
- ಉರ್ದು ವಿಷಯದಲ್ಲಿ ಹೆಚ್ಚಿನ ಅಂಕ ಪಡೆದ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನ ನೀಡುವುದು.
- ಸಂಘ/ಸಂಸ್ಥೆಗಳಿಂದ ಸ್ಥಾಪಿಸಿರುವ ಉರ್ದು ಗ್ರಂಥಾಲಯಗಳನ್ನು ಉತ್ತಮಪಡಿಸಲು ಸಹಾಯಧನ ನೀಡುವುದು.
- ಉರ್ದು ಕಲಿಕಾ ಕೇಂದ್ರಗಳನ್ನು ನಡೆಸಲು ಸಂಘ/ಸಂಸ್ಥೆಗಳಿಗೆ ಧನಸಹಾಯ ನೀಡುವುದು.

ಅನುಬಂಧ -2

# ಅಲ್ಪಸಂಖ್ಯಾತರ ನಿರ್ದೇಶನಾಲಯ

## ಅನುಬಂಧ-1

ಅಲ್ಪಸಂಖ್ಯಾತರ ಕಲ್ಯಾಣಕ್ಕಾಗಿ ಹಾಗೂ ಸಾಮಾಜಿಕ ನ್ಯಾಯ ಮತ್ತು ಸಾಮಾಜಿಕ ಅಭಿವೃದ್ಧಿಗಾಗಿ ಕಾರ್ಯಗತಗೊಳಿಸಲಾಗುತ್ತಿರುವ ಕಾರ್ಯಕ್ರಮಗಳು/ಯೋಜನೆಗಳ ವಿವರಗಳು ಈ ಕೆಳಕಂಡಂತಿವೆ.

| ಕ್ರ. ಸಂ | ಯೋಜನೆ/ ಕಾರ್ಯಕ್ರಮಗಳ ವಿವರ |
|---|---|
| 1 | ಅಲ್ಪಸಂಖ್ಯಾತರ ವಸತಿ ಶಾಲೆಗಳ ನಿರ್ವಹಣೆ |
| 2 | ನೂತನ ಹಾಸ್ಟೆಲ್‌ಗಳ ಪ್ರಾರಂಭ ಮತ್ತು ಮೌಲಾನಾ ಆಜಾದ್ ಶಾಲೆಗಳ ನಿರ್ವಹಣೆ |
| 3 | ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ ಹಾಸ್ಟಲ್‌ಗಳ ನಿರ್ವಹಣೆ |
| 4 | ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ ವಿದ್ಯಾಸಿರಿ ಯೋಜನೆ |
| 5 | ಕ್ರಿಶ್ಚಿಯನ್ ಸಮುದಾಯದ ಅಭಿವೃದ್ಧಿಗಾಗಿ ಸಮುದಾಯ ಭವನ ನಿರ್ವಹಣೆ, ಚರ್ಚ್ ದುರಸ್ಥಿ, ಜೀರ್ಣೋದ್ಧಾರ, ಅನಾಥಾಶ್ರಮ/ವೃದ್ಧಾಶ್ರಮ. |
| 6 | ಜೈನ್, ಬೌದ್ಧ ಮತ್ತು ಸಿಖ್ ಸಮುದಾಯದ ಅಭಿವೃದ್ಧಿಗಾಗಿ ಬಸದಿ ಸಮುದಾಯಭವನ ನಿರ್ಮಾಣ |
| 7 | ಮದರಸಾದಲ್ಲಿ ಉತ್ತಮ ಗುಣಮಟ್ಟದ ಶಿಕ್ಷಣವನ್ನು ಒದಗಿಸಲು ಆಧುನೀಕರಣ ಮತ್ತು ಗಣಕೀಕೃತ ಶಿಕ್ಷಣ ನೀಡಲು ಅನುದಾನ |
| 8 | ಅಲ್ಪಸಂಖ್ಯಾತರಿಗಾಗಿ ವಸತಿ ನಿಲಯ ಮತ್ತು ವಸತಿ ಶಾಲೆ ಕಟ್ಟಡಗಳ ನಿರ್ಮಾಣ |
| 9 | 11 ಕಾರ್ಪೋರೇಷನ್‌ಗಳಲ್ಲಿ ಅಲ್ಪಸಂಖ್ಯಾತರ ಸ್ಲಮ್/ಕಾಲೋನಿ ಅಭಿವೃದ್ಧಿಗಾಗಿ ಯೋಜನೆ |
| 10 | ಪ್ರಧಾನ ಮಂತ್ರಿ ಜನವಿಕಾಸ ಕಾರ್ಯಕ್ರಮದಡಿಯಲ್ಲಿ ವಸತಿ ಶಾಲೆಗಳ ಕಟ್ಟಡ ನಿರ್ಮಾಣ |
| 11 | ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ತರಬೇತಿ ಕಾರ್ಯಕ್ರಮ |
| 12 | ಸರ್ಕಾರಿ ಅಲ್ಪಸಂಖ್ಯಾತರ ಶಾಲೆಗಳಿಗೆ ಶಿಕ್ಷಣ ಮತ್ತು ಕಲಿಕೆ ಸಾಧನಗಳು |
| 13 | ಅಲ್ಪಸಂಖ್ಯಾತರಿಗೆ ವಿದ್ಯಾರ್ಥಿವೇತನ ಮತ್ತು ಶುಲ್ಕ ಮರುಪಾವತಿ |
| 14 | ಅಲ್ಪಸಂಖ್ಯಾತ ವಿದ್ಯಾರ್ಥಿಗಳಿಗೆ ಉತ್ತೇಜನ ಕಾರ್ಯಕ್ರಮಗಳು |
| 15 | ಅಲ್ಪಸಂಖ್ಯಾತರಿಗಾಗಿ ಕಾನೂನು ಪದವೀಧರರಿಗೆ ತರಬೇತಿ ಭತ್ಯೆ |
| 16 | ಅಲ್ಪಸಂಖ್ಯಾತರಿಗಾಗಿ ಅನಾಥಾಲಯ ನಿರ್ವಹಣೆಗಾಗಿ ಅನುದಾನ |

ಅನುಬಂಧ -3

ಅನುಬಂಧ-'ಅ'

2021-22ನೇ ಸಾಲಿಗೆ ನಿಗಮದಲ್ಲಿ ಅನುಷ್ಠಾನಗೊಳಿಸಲಾಗುತ್ತಿರುವ ಯೋಜನೆಗಳು

1. 'ಅರಿವು' (ವಿದ್ಯಾಭ್ಯಾಸಸಾಲ) ಯೋಜನೆ
2. ಗಂಗಾಕಲ್ಯಾಣ ಯೋಜನೆ
3. 'ಶ್ರಮಶಕ್ತಿ' ಯೋಜನೆ
4. ಮೈಕ್ರೋ ಸಾಲ ಮತ್ತು ಸಹಾಯಧನ ಯೋಜನೆ
5. ಮೈಕ್ರೋವೈಯುಕ್ತಿಕ (ಕೋವಿಡ್19) ಸಾಲ ಯೋಜನೆ
6. ಟ್ಯಾಕ್ಸಿ/ಗೂಡ್ಸ್ ವಾಹನ/ಆಟೋ ರಿಕ್ಷಾಖರೀದಿಸಲುಸಹಾಯಧನ ಯೋಜನೆ

1. ಅರಿವುಯೋಜನೆ

ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ ದಿಂದ ಅನುಷ್ಠಾನ ಗೊಳ್ಳುತ್ತಿರುವ ಅರಿವು ವಿದ್ಯಾಭ್ಯಾಸ ಸಾಲ ಯೋಜನೆಯನ್ನು 2021-22ನೇ ಸಾಲಿಗೆ ಅನ್ವಯವಾಗುವಂತೆ ಹೊಸ (ಫ್ರೆಶ್) ಮತ್ತು ನವೀಕರಣ ಪ್ರಕರಣಗಳಲ್ಲಿ ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ಆಯ್ಕೆ ಯಾದ ವೈದ್ಯಕೀಯ/ವೃತ್ತಿಪರ ಕೋರ್ಸುಗಳ ವಿಧ್ಯಾರ್ಥಿಗಳಿಗೆ ಮಾತ್ರ ಸಾಲವನ್ನು ನೀಡಲಾಗುತ್ತದೆ.

2. ಗಂಗಾ ಕಲ್ಯಾಣ ಯೋಜನೆ:-

ಗ್ರಾಮೀಣ ಪ್ರದೇಶದಲ್ಲಿ ಎಲ್ಲೆಲ್ಲಿ ಹರಿಯುವ ನೀರಿನ ವ್ಯವಸ್ಥೆ ಲಭ್ಯವಿರುವುದಿಲ್ಲವೋ ಅಂತಹ ಸ್ಥಳದಲ್ಲಿ ತಜ್ಞ ಭೂವಿಜ್ಞಾನಿಗಳ ಮೂಲಕ ಗುರುತಿಸಲ್ಪಟ್ಟ ಜಲ ಬಿಂದು ವ್ಯಾಪ್ತಿಯೊಳಗೆ ನೆಲದಡಿಯಲ್ಲಿ ಕೊಳವೆ ಬಾವಿಯನ್ನು ಕೊರೆದು, ನಂತರ ನೀರು ಸಂಗ್ರಹಿಸಲು ಟ್ಯಾಂಕು ನಿರ್ಮಿಸಿ ಕೊಟ್ಟು, ಅದಕ್ಕೆ ಅಳವಡಿಸಿದ ಪೈಪುಲೈನ್ ಮೂಲಕ ಕೃಷಿಭೂಮಿಗೆ ನೀರನ್ನು ಒದಗಿಸಲಾಗುತ್ತದೆ.ಈ ಯೋಜನೆಯು ಸಂಪೂರ್ಣ ಸಹಾಯಧನ ಯೋಜನೆಯಾಗಿದೆ. ಈ ಯೋಜನೆಯಡಿಯಲ್ಲಿ 01 ಎಕರೆ 20 ಗುಂಟೆ ಯಿಂದ 5 ಎಕರೆ ಭೂಮಿಯನ್ನು ಹೊಂದಿರುವ ಫಲಾನುಭವಿಗೆ ಕೊಳವೆಬಾವಿ ಕೊರೆಯಿಸಿ ಅದಕ್ಕೆ ನಿಗಮದಿಂದ ಪಂಪ್ಸೆಟ್ಟು ಅಳವಡಿಸಲಾಗುವುದು.

ವೈಯಕ್ತಿಕ ಕೊಳವೆಬಾವಿ ಯೋಜನೆಗೆ ಸರ್ಕಾರವು ರೂ.2.00 ಲಕ್ಷಗಳನ್ನು ನಿಗದಿಪಡಿ ಸಿರುತ್ತದೆ. ಈ ಮೊತ್ತದಲ್ಲಿ ಕೊಳವೆಬಾವಿಯ ಕೊರೆಯುವಿಕೆ, ಪಂಪ್ಸೆಟ್ಟು ಸರಬರಾಜು ಮತ್ತು ವಿದ್ಯುದ್ದೀಕರಣದ ಠೇವಣಿ ಮೊತ್ತವನ್ನು ಭರಿಸಲಾಗುತ್ತದೆ. ಈ ಯೋಜನೆ ಅಡಿಯಲ್ಲಿ ಬೆಂಗಳೂರು ಗ್ರಾಮಾಂತರ, ಕೋಲಾರ, ಚಿಕ್ಕಬಳ್ಳಾಪುರ, ರಾಮನಗರ, ತುಮಕೂರು ಜಿಲ್ಲೆಗೆ ಸಹಾಯಧನ ರೂ.3.50 ಲಕ್ಷಗಳುವಾಗಿರುತ್ತದೆ. ಇದರಲ್ಲಿ ರೂ. 50,000/- ವಿದ್ಯುದ್ದೀಕರಣ ಠೇವಣಿ ಮೊತ್ತವಾಗಿರುತ್ತದೆ.

3. ಶ್ರಮಶಕ್ತಿ ಯೋಜನೆ

ಈ ಯೋಜನೆಯಡಿಯಲ್ಲಿ ಅಲ್ಪಸಂಖ್ಯಾತ ವರ್ಗದ ಕುಲ ಕಸುಬುದಾರರಿಗೆ ತರಬೇತಿ ನೀಡಿ, ಅವರು ತಮ್ಮ ಕಲಾತ್ಮಕ ಮತ್ತು ತಾಂತ್ರಿ ಕೌಶಲ್ಯವನ್ನು ವೃದ್ಧಿಸಿಕೊಂಡು ಅದೇ ಕಸುಬನ್ನು ಮುಂದುವರೆಸಲು ಅಥವಾ ಸಣ್ಣ ವ್ಯಾಪಾರವನ್ನು ಪ್ರಾರಂಭಿಸಲು ಅಥವಾ ಅಭಿವೃದ್ಧಿಗೊಳಿಸುವ ಸಲುವಾಗಿ, ನಿಗಮದಿಂದ ಕಡಿಮೆ ಬಡ್ಡಿದರ ದಲ್ಲಿ ರೂ.50,000/-ದವರೆಗೆ ಸಾಲ ಸೌಲಭ್ಯವನ್ನು ಕಲ್ಪಿಸಲಾಗುತ್ತದೆ. ಇದರಲ್ಲಿ, ಶೇ.50ರಷ್ಟು ಸಾಲವನ್ನು 36 ತಿಂಗಳಿನಲ್ಲಿ ಫಲಾನುಭವಿಯು ಮರುಪಾವತಿ ಮಾಡಿದಲ್ಲಿ, ಉಳಿದ ಶೇ.50ರಷ್ಟು ಹಣವನ್ನು 'ಬ್ಯಾಕ್ಎಂಡ್"ಸಹಾಯಧನವನ್ನಾಗಿ ಪರಿಗಣಿಸಲಾಗುತ್ತದೆ. ಫಲಾನುಭವಿಯು ತಾನು ಪಡೆದಸಾಲವನ್ನು 36 ತಿಂಗಳೊಳಗಾಗಿ ಮರುಪಾವತಿ ಮಾಡಲು ವಿಫಲನಾದಲ್ಲಿ, ಶೇ.50ರಷ್ಟು ಬ್ಯಾಕ್ಎಂಡ ಸಹಾಯಧನವನ್ನು ಸಹ ಸಾಲವೆಂದು ಪರಿಗಣಿಸಲಾಗುತ್ತದೆ.

4. ಸಾಲ ಹಾಗೂ ಸಹಾಯಧನ ಯೋಜನೆ

ಈ ಯೋಜನೆಯನ್ನು ಸ್ವ-ಸಹಾಯಗುಂಪಿನ ಮೂಲಕ ಅನುಷ್ಠಾನ ಗೊಳಿಸಲಾಗುತ್ತಿದೆ. ಅಂತಹ ಸಂಘಟಿತ ಗುಂಪು ಅಲ್ಪಸಂಖ್ಯಾತ ವರ್ಗಕ್ಕೆ ಸೇರಿದ 10 ರಿಂದ 20 ಸದಸ್ಯರನ್ನು ಹೊಂದಿದ್ದು, ಅದರ ಸದಸ್ಯರು ಹಣ ಕಾಸು ಮಿತವ್ಯಯ ಚಟುವಟಿಕೆಯಲ್ಲಿ (thrift activity) ತೊಡಗಿಸಿಕೊಳ್ಳುವ ಉದ್ದೇಶವನ್ನು ಹೊಂದಿರಬೇಕು. ಅಂತಹ ಸಂಘದ ಸದಸ್ಯರು ತಮ್ಮಲ್ಲಿ ಇಬ್ಬರನ್ನು ಪ್ರತಿನಿಧಿ-01 ಮತ್ತು ಪ್ರತಿನಿಧಿ-02 ಆಗಿ ಆಯ್ಕೆ ಮಾಡಿಕೊಂಡಿರಬೇಕು.ಪ್ರತಿನಿಧಿಗಳುಸ್ವ-ಸಹಾಯಗುಂಪಿನ ಹೆಸರಿನಲ್ಲಿ ಬ್ಯಾಂಕ್ ಖಾತೆ ತೆರೆದು ಬ್ಯಾಂಕಿನಿಂದ ತಮ್ಮನ್ನು 'ಅಧಿಕೃತ ರುಜುದಾರರು' ಎಂಬ ಮಾನ್ಯತೆ ಪಡೆದಿರಬೇಕು.ಈ ಯೋಜನೆಯಡಿಯಲ್ಲಿ ಅಲ್ಪಸಂಖ್ಯಾತರ ಮಹಿಳೆಯರ ರೂಪಿಸಿಕೊಂಡ ಸ್ವ-ಸಹಾಯ ಗುಂಪಿಗೆ ಪ್ರಾಶಸ್ತ್ಯ ಕೊಡಲಾಗುವುದು. ರಾಜ್ಯದ ನಗರ ಮತ್ತು ಗ್ರಾಮೀಣ ಪ್ರದೇಶದಲ್ಲಿ ನೆಲೆಸಿರುವ ಅಲ್ಪ ಸಂಖ್ಯಾತರು ಪ್ರಾರಂಭಿಸಬಯಸುವ ಸಣ್ಣ ವ್ಯಾಪಾರ ಅಂದರೆ, ತಳ್ಳುವಗಾಡಿಯಲ್ಲಿ ತರಕಾರಿ/ಹಣ್ಣು ಮಾರಾಟ, ಕಲಾಯಿ ಮಾಡುವಿಕೆ, ಹಾಸಿಗೆ ಮಾಡುವಿಕೆ, ಪಾನ್ ಅಂಗಡಿ, ಕಡ್ಲೆಕಾಯಿ ವ್ಯಾಪಾರ, ಸೈಕಲ್‌ರಿಪೇರಿ, ಗ್ಯಾಸ್/ಆರ್ಕ್‌ವೆಲ್ಡಿಂಗ್, ವಲ್ಕನೈಸಿಂಗ್, ಮೀನು ಮಾರಾಟ, ಟೀ ಅಂಗಡಿ ಮುಂತಾದುವುಗಳಿಗೆ ನಿಗಮವು ಪ್ರತಿಸದಸ್ಯನಿಗೆ ರೂ.10,000/- ಸಾಲ ಸೌಲಭ್ಯವನ್ನು (ರೂ.5,000/- ಸಾಲ ಮತ್ತು ರೂ.5,000/- ಸಹಾಯಧನ) ನೀಡುತ್ತದೆ. ನಿಗಮ ದಿಂದ ಸಾಲವನ್ನು ಸ್ವ-

ಸಹಾಯ ಗುಂಪಿಗೆ ನೇರವಾಗಿ ಮಂಜೂರು ಮಾಡಲಾಗುವುದು. ನಂತರ ಅಂತಹ ಸ್ವ-ಸಹಾಯ ಗುಂಪು, ತಮ್ಮ ಸದಸ್ಯರಿಗೆ ಸಾಲವನ್ನು ಬಿಡುಗಡೆ ಮಾಡುಬೇಕು. ಸಾಲವನ್ನು ಶೇ.5ರ ಬಡ್ಡಿದರದಲ್ಲಿ 36 ಮಾಸಿಕ ಕಂತುಗಳಲ್ಲಿ ಮರುಪಾವತಿ ಮಾಡಬೇಕಾಗುತ್ತದೆ.

5.ಮೈಕ್ರೋಸಾಲ ಯೋಜನೆ(ವ್ಯೆಯಕ್ತಿಕ) ಮಹಿಳೆಯರಿಗೆ ಮಾತ್ರ (2020-21 ನೇ ಸಾಲಿಗೆ ಮಾತ್ರ)

ಕೋವಿಡ್-19 ನಿಂದಾಗಿ ತೊಂದರೆಗೊಳಗಾದ, ನಿಗಮದ ಯಾವುದೇ ಯೋಜನೆಯಲ್ಲೂ ಇದುವರೆಗೆ ಸಾಲ, ಸಹಾಯಧನ ಯಾವುದನ್ನೂ ಪಡೆಯದ ಕಡುಬಡತನದಲ್ಲಿರುವ ಅಲ್ಪಸಂಖ್ಯಾತ ಸಮುದಾಯದ ಬಿಪಿಎಲ್ ಕಾರ್ಡ ಹೊಂದಿರುವ 25 ರಿಂದ 50 ವಯೋಮಾನದೊಳಗಿನ ಮಹಿಳೆಯರಿಗೆ, ತಳ್ಳುವಗಾಡಿಯಲ್ಲಿ ವ್ಯಾಪಾರ, ಬೀದಿವ್ಯಾಪಾರ, ಜಾತ್ರೆಗಳಲ್ಲಿ ವ್ಯಾಪಾರ, ಕಿರಾಣಿ ಅಂಗಡಿ, ಅರಿಷಿನ / ಕುಂಕುಮ/ ಅಗರಬತ್ತಿ/ ಕರ್ಪೂರ, ರಸ್ತೆ ಬದಿಯಲ್ಲಿ, ಟೀ / ಕಾಫಿ ಮಾರಾಟ, ಎಳನೀರುವ್ಯಾಪಾರ, ಹೂವಿನವ್ಯಾಪಾರ, ತರಕಾರಿವ್ಯಾಪಾರ, ಹಣ್ಣಿನವ್ಯಾಪಾರ, ಇನ್ನಿತರ ಸಣ್ಣ ವ್ಯಾಪಾರ ನಡೆಸಲು ಆರಂಭಿಕ ಬಂಡವಾಳಕ್ಕಾಗಿ ರೂ.10,000/-ಮೊತ್ತದ (ರೂ.8000/-ಸಾಲ +ರೂ.2,000/-ಸಬ್ಸಿಡಿ) ಅಲ್ಪಾವಧಿ ಸಾಲ ಯೋಜನೆ ಇದು.

6. ಟ್ಯಾಕ್ಸಿ/ಗೂಡ್ಸ್ ವಾಹನ/ಆಟೋರಿಕ್ಷಾ ಖರೀದಿಗಾಗಿ ಸಹಾಯಧನ ಯೋಜನೆ

ಸದರಿ ಯೋಜನೆಯಡಿ ಟ್ಯಾಕ್ಸಿ / ಗೂಡ್ಸ್ ವಾಹನ/ ಆಟೋರಿಕ್ಷಾವನ್ನು ಖರೀದಿಸಲು ಪ್ರತಿ ಅರ್ಜಿದಾರರಿಗೆ ರೂ.75,000/- ಸಹಾಯಧನ ನೀಡಲಾಗುತ್ತದೆ. ಬ್ಯಾಂಕ್ ಸಾಲದ ಮೂಲಕ ಟ್ಯಾಕ್ಸಿ / ಗೂಡ್ಸ್ ವಾಹನ/ ಆಟೋ ರಿಕ್ಷಾವನ್ನು ಖರೀದಿಸುವ ಅರ್ಜಿದಾರರು ಈ ಸೌಲಭ್ಯವನ್ನು ಪಡೆಯಬಹುದು.

ವ್ಯವಸ್ಥಾಪಕ ನಿರ್ದೇಶಕರು